ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

**ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಬೆಂಗಳೂರು**
**1ನೇ ಮಹಡಿ, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು-23**

ಸಂಖ್ಯೆ: ಎನ್‌ಹೆಚ್‌ಎಂ/ಡಿಡಿ/ಐಎಂಎಂ/20/2021-22 ದಿನಾಂಕ: 23.06.2021

ಇವರಿಗೆ,

ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.
ಎಲ್ಲಾ ಜಿಲ್ಲಾಧಿಕಾರಿಗಳು

**ವಿಷಯ:** ಪದವಿ ಕಾಲೇಜು ವಿದ್ಯಾರ್ಥಿಗಳು, ಬೋಧಕ ಸಿಬ್ಬಂದಿ ಹಾಗು ಬೆಂಬಲ ಸಿಬ್ಬಂದಿಗೆ ಕೋವಿಡ್ -19 ಲಸಿಕಾಕರಣ ನಡೆಸುವ ಕುರಿತು

**ಉಲ್ಲೇಖ:** ಸಂಖ್ಯೆ: ಮುಕಾ.ಟಿಪ್ಪಣಿ- ಮುಕಾ/2651531/2021 ದಿನಾಂಕ :22/06/2021

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಿತ ಪತ್ರದಲ್ಲಿ, ದಿನಾಂಕ 22/06/2021 ರಂದು ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮುಂದಿನ ತಿಂಗಳಿನಿಂದ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಿದ್ದು ಅದಕ್ಕೂ ಪೂರ್ವವಾಗಿ ಪದವಿ ವಿದ್ಯಾರ್ಥಿಗಳು/ಬೋಧಕ ಸಿಬ್ಬಂದಿ ಹಾಗು ಬೆಂಬಲ ಸಿಬ್ಬಂದಿಗಳಿಗೆ ಕೋವಿಡ್ ಲಸಿಕಾಕರಣ ನಡೆಸಲು ನಿರ್ಣಯಿಸಿದ ಹಿನ್ನೆಲೆಯಲ್ಲಿ ಒಂದು ಅಭಿಯಾನವನ್ನು ಏರ್ಪಡಿಸಿ ಕೋವಿಡ್ ಲಸಿಕಾಕರಣ ನಡೆಸಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಸೂಚಿಸಿರುತ್ತಾರೆ .

ಈ ಹಿನ್ನೆಲೆಯಲ್ಲಿ ಜಿಲ್ಲೆಗಳಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.

1. ಜಿಲ್ಲೆಯ ಹಾಗು ಬಿಬಿಎಂಪಿ ವ್ಯಾಪ್ತಿಯಲ್ಲಿನ ಎಲ್ಲಾ 12+ ಕಾಲೇಜುಗಳ (ಪದವಿ/ಡಿಪ್ಲೋಮ್/ಐಟಿ) ಪಟ್ಟಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆಯುವುದು.
2. ಪ್ರತಿ ಕಾಲೇಜಿನ 18 ವರ್ಷ ಮೇಲ್ಪಟ್ಟ ಅರ್ಹ ಫಲಾನುಭವಿಗಳ (ವಿದ್ಯಾರ್ಥಿಗಳು /ಬೋಧಕ ಸಿಬ್ಬಂದಿ ಹಾಗು ಬೆಂಬಲ ಸಿಬ್ಬಂದಿಯ ಸಂಸ್ಥೆಯ ಮುಖ್ಯಸ್ಥರಿಂದ ಧೃಡೀಕರಿಸಿದ) ಸಂಖ್ಯೆಯನ್ನು ಆರೋಗ್ಯ ಇಲಾಖೆಗೆ ಲಸಿಕಾಕರಣದ ಸಿದ್ಧತೆಗೆ ಒದಗಿಸುವುದು. ಈ ಕುರಿತ ಕಾರ್ಯಗಳಿಗೆ ಪ್ರತಿ ಕಾಲೇಜಿನ ಮುಖ್ಯಸ್ಥರು ಒಬ್ಬ ಜವಾಬ್ದಾರಿಯುತ ನೋಡಲ್ ಅಧಿಕಾರಿಯನ್ನು ನಿಯೋಜಿಸುವುದು. ಸದರಿ ನೋಡಲ್ ಅಧಿಕಾರಿಗಳು ಆರೋಗ್ಯ ಇಲಾಖೆಯ RCH ಅಧಿಕಾರಿಗಳೊಂದಿಗೆ ಸಮನ್ವಯಿಸುವುದು.
3. ಸದರಿ ಪಟ್ಟಿಯಲ್ಲಿನ ಅರ್ಹ ಫಲಾನುಭವಿಗಳ ಸಂಖ್ಯೆ ಹಾಗು ಲಸಿಕೆಗಳ ಲಭ್ಯತೆಗೆ ಅನುಸಾರವಾಗಿ ಕಾಲೇಜು ಆವರಣದಲ್ಲಿಯೇ (Work Place Vaccination Site SOP ಯಂತೆ) ಲಸಿಕಾಕರಣ ಸತ್ರವನ್ನು ಆಯೋಜಿಸಿ ಅಭಿಯಾನ ಮಾದರಿಯಲ್ಲಿ ಕೋವಿಡ್ ಲಸಿಕಾಕರಣ ಸಂಪನ್ನಗೊಳಿಸುವುದು.
4. ನೋಡಲ್ ಅಧಿಕಾರಿಗಳು ಅರ್ಹಫಲಾನುಭವಿಗಳಲ್ಲರಿಗೂ ಲಸಿಕಾಕರಣದ ಮಾಹಿತಿ ತಲುಪುವುದರ ಬಗ್ಗೆ ಖಚಿತ ಪಡಿಸಿಕೊಳ್ಳುವುದು.
5. ಎಲ್ಲಾ ಹಂತಗಳಲ್ಲಿ ಭಾರತ ಸರ್ಕಾರದ ಕೋವಿಡ್-19 ಲಸಿಕಾರಣ ಮಾರ್ಗಸೂಚಿಯನ್ನು ಕಡ್ಡಾಯವಾಗಿ ಪಾಲಿಸುವುದು

ಅರುಂಧತಿ

6. ಸಂಬಂಧಪಟ್ಟ ಇಲಾಖೆಗಳ ಹಿರಿಯ ಅಧಿಕಾರಿಗಳೊಂದಿಗೆ ತಾವುಗಳು ಸಮನ್ವಯ ಸಭೆ ಕರೆದು ಕಾರ್ಯ ಯೋಜನೆಯ ಮೇಲ್ವಿಚಾರಣೆ ನಡೆಸುವುದು.

ಸದರಿ ಕಾರ್ಯಾಚರಣೆಯ ಯಶಸ್ವಿ ಅನುಷ್ಠಾನಕ್ಕಾಗಿ ತಮ್ಮ ಸಹಕಾರ ಕೋರಲಾಗಿದೆ

ಅರುಂಧತಿ

**ಅಭಿಯಾನ ನಿರ್ದೇಶಕರು**
**ರಾಷ್ಟ್ರೀಯ ಆರೋಗ್ಯ ಅಭಿಯಾನ**

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:

1. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು
2. ಮುಖ್ಯ ಆರೋಗ್ಯ ಅಧಿಕಾರಿಗಳು (ಸಾರ್ವಜನಿಕ ಆರೋಗ್ಯ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.
3. ಎಲ್ಲಾ ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳು
4. ಲಸಿಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮಾಹಿತಿಗಾಗಿ,

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ.
3. ಮಾನ್ಯ ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
4. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾ ಸೇವೆಗಳು, ಬೆಂಗಳೂರು
5. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಉನ್ನತ ಶಿಕ್ಷಣ ಇಲಾಖೆ.
7. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
8. ಅಪರ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
9. ಯೋಜನಾ ನಿರ್ದೇಶಕರು (ಆರ್‌ಸಿಹೆಚ್) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
10. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
11. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
12. ಉನ್ನತ ಶಿಕ್ಷಣ
13. ಕಛೇರಿ ಪ್ರತಿ.